# ಕ.ರಾ.ರ.ಸಾರಿಗೆ ನಿಗಮಗಳ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿ

* ಕೆ.ಎಸ್.ಆರ್.ಟಿ.ಸಿ ಸ್ಟಾಫ್ ಅಂಡ್ ವರ್ಕರ್ಸ್ ಫೆಡರೇಷನ್, (ಎ.ಐ.ಟಿ.ಯು.ಸಿ)
* ಅಖಿಲ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನೌಕರರ ಮಹಾಮಂಡಳಿ
* ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನೌಕರರ ಫೆಡರೇಷನ್ (ಸಿ.ಐ.ಟಿ.ಯು)
* ಕೆ.ಎಸ್.ಆರ್.ಟಿ.ಸಿ ಪ.ಜಾ ಮತ್ತು ಪ.ಪಂ.ನೌಕರರ ಸಂಘ (40/78)

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಪ.ಜಾ/ಪ.ಪಂ.ಅಧಿಕಾರಿಗಳು ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘ (ರಿ) (671/2001)

*ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ನೌಕರರ ಸಂಘ (ರಿ).

---

ನಂ.6. ಶಿರೂರ್ ಪಾರ್ಕ್ ರಸ್ತೆ, ಶೇಷಾದ್ರಿ ಪುರ, ಬೆಂಗಳೂರು-560 020

---

ಶ್ರೀ ರಾಮಲಿಂಗಾರೆಡ್ಡಿಯವರು, **03ನೇ ಮೇ, 2025**

ಸನ್ಮಾನ್ಯ ಸಾರಿಗೆ ಮತ್ತು ಮುಜರಾಯಿ ಇಲಾಖೆ ಸಚಿವರು,

ಕರ್ನಾಟಕ ಸರ್ಕಾರ, ವಿಧಾನ ಸೌಧ,

ಬೆಂಗಳೂರು.

ಮಾನ್ಯರೇ,

**ವಿಷಯ: ಸಾರಿಗೆ ನಿಗಮಗಳಲ್ಲಿ ತಾಂತ್ರಿಕ ಸಿಬ್ಬಂದಿಗಳ ನೇಮಕಾತಿಗೆ ಸಚಿವ ಸಂಪುಟದ ಅನುಮೋದನೆ ನೀಡುವ ಬಗ್ಗೆ ಇತ್ಯಾದಿ.**

ದಿನಾಂಕ 15.04.2025 ರಂದು ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ತ್ರಿಪಕ್ಷೀಯ ಸಭೆಯಲ್ಲಿ ನಮ್ಮ ಜಂಟಿ ಕ್ರಿಯಾ ಸಮಿತಿಯ ವತಿಯಿಂದ 38 ತಿಂಗಳ ಬಾಕಿ ಪಾವತಿ., 01.01.2024 ರಿಂದ ವೇತನ ಪರಿಷ್ಕರಣೆ, ಹಿಂದಿನ ಮುಷ್ಕರದ ಸಂದರ್ಭದಲ್ಲಿ ವಜಾಗೊಂಡ ನೌಕರರ ಮರು ನೇಮಕಾತಿ, ನೌಕರರ ವಿರುದ್ಧದ ಕ್ರಿಮಿನಲ್ ಮೊಕದ್ದಮೆಗಳ ರದ್ದತಿ, ಸಾರಿಗೆ ನಿಗಮಗಳಲ್ಲಿ ತಾಂತ್ರಿಕ ಸಿಬ್ಬಂದಿಗಳ ಕೊರತೆ ಮುಂತಾದ ಹಲವಾರು ಬೇಡಿಕೆಗಳನ್ನು ಮಾನ್ಯ ಮುಖ್ಯಮಂತ್ರಿಗಳ ಗಮನಕ್ಕೆ ತಂದೆವು. ಈ ಎಲ್ಲಾ ಬೇಡಿಕೆಗಳನ್ನು ಸಮಾಧಾನವಾಗಿ ಆಲಿಸಿದ ಮುಖ್ಯಮಂತ್ರಿಯವರು ತಮ್ಮೊಂದಿಗೆ ಚರ್ಚಿಸಿ ಅತಿ ಶೀಘ್ರದಲ್ಲಿಯೇ ನಮ್ಮೊಂದಿಗೆ ಇನ್ನೊಂದು ಸಭೆ ನಡೆಸಿ ಇತ್ಯರ್ಥಪಡಿಸುವುದಾಗಿ ಭರವಸೆ ನೀಡಿದರು. ನಾಲ್ಕೂ ಸಾರಿಗೆ ನಿಗಮಗಳಲ್ಲಿರುವ ತಾಂತ್ರಿಕ ಸಿಬ್ಬಂದಿಗಳ ಕೊರತೆಯ ಬಗ್ಗೆ ತಾವು ಮಧ್ಯಪ್ರವೇಶಿಸಿ, ಈ ಬಗ್ಗೆ ಪ್ರಸ್ತಾವನೆಯನ್ನು ರಾಜ್ಯ ಸರ್ಕಾರದ ಕ್ಯಾಬಿನೆಟ್ ಮುಂದೆ ಮಂಡಿಸಿ ಒಪ್ಪಿಗೆ ಪಡೆಯಬೇಕೆಂದು ತಿಳಿಸಿದಿರಿ. ಸನ್ಮಾನ್ಯ ಮುಖ್ಯಮಂತ್ರಿಯವರು ಇದಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಿದ್ದು ಉತ್ತಮ ಬೆಳವಣಿಗೆಯಾಗಿದೆ.

ಈ ಹಿನ್ನೆಲೆಯಲ್ಲಿ ತಾವು ಮುಂದಿನ ಕ್ಯಾಬಿನೆಟ್ ಸಭೆಯಲ್ಲಿ ಸಾರಿಗೆ ನಿಗಮಗಳಲ್ಲಿ ತಾಂತ್ರಿಕ ಸಿಬ್ಬಂದಿಗಳ ನೇಮಕಾತಿಗೆ ಅಗತ್ಯ ಪ್ರಸ್ತಾವನೆಯನ್ನು ಮಂಡಿಸಿ ಅನುಮೋದನೆ ಪಡೆದು ಸಾರಿಗೆ ನಿಗಮಗಳಲ್ಲಿ ತಾಂತ್ರಿಕ ಸಿಬ್ಬಂದಿಗಳ ಕೊರತೆಯನ್ನು ನೀಗಿಸಿ, ಸಂಸ್ಥೆಗಳು ಇನ್ನೂ ಹೆಚ್ಚಿನ ದಕ್ಷತೆಯಿಂದ ನಾಡಿನ ಜನತೆಗೆ ಸಾರಿಗೆ ಸೇವೆ ಒದಗಿಸಲು ಅನುವು ಮಾಡಿಕೊಡಬೇಕೆಂದು ತಮ್ಮಲ್ಲಿ ಕಳಕಳಿಯಿಂದ ವಿನಂತಿಸುತ್ತೇವೆ.

ವಂದನೆಗಳೊಂದಿಗೆ

ಇಂತಿ ನಿಮ್ಮ ವಿಶ್ವಾಸಿಗಳು

ಕೆ.ಎಸ್.ಆರ್.ಟಿ.ಸಿ. ಸ್ಟಾಫ್ ಅಂಡ್ ವರ್ಕರ್ಸ್ ಫೆಡರೇಷನ್ ಪರವಾಗಿ

(ಹೆಚ್.ವಿ.ಅನಂತಸುಬ್ಬರಾವ್)

ಅಖಿಲ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನೌಕರರ ಮಹಾ ಮಂಡಲಿ ಪರವಾಗಿ

(ಬಿ.ಜಯದೇವರಾಜೇಅರಸು)

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನೌಕರರ ಫೆಡರೇಷನ್ (ಸಿ.ಐ.ಟಿ.ಯು.) ಪರವಾಗಿ

(ಹೆಚ್.ಡಿ. ರೇವಪ್ಪ)

ಕೆ.ಎಸ್.ಆರ್.ಟಿ.ಸಿ ಎಸ್.ಸಿ & ಎಸ್. ಟಿ. ಎಂಪ್ಲಾಯೀಸ್ ಯೂನಿಯನ್ ಪರವಾಗಿ

(ವೆಂಕಟರವಣಪ್ಪ)

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಪ.ಜಾ/ಪ.ಪಂ.ಅಧಿಕಾರಿಗಳು ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘ (ರಿ) (671/2001) ಪರವಾಗಿ

(ಎಸ್. ಸೋಮಣ್ಣ)

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ನೌಕರರ ಸಂಘ (ರಿ) ಪರವಾಗಿ

(ಜಗದೀಶ್)